ಆದರೆ, ಈ ಬಗ್ಗೆ ಯಾವುದೇ ಸಮೀಕ್ಷೆ ಆಗಿರುವುದಿಲ್ಲ. ಆದಾಗ್ಯೂ ಇದನ್ನು ತಡೆ ಗಟ್ಟಲು PNDT ಕಾಯ್ದೆಯನ್ನು ಜಾರಿಗೊಳಿಸಲಾಗಿದೆ ಹಾಗೂ ಸ್ವಯಂಸೇವಾ ಸಂಸ್ಥೆಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

558(715) ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಕೇಂದ್ರದಲ್ಲಿ ಎ.ಪಿ.ಎಂ.ಸಿ. ಗೋದಾಮನ್ನು ಇದುವರೆಗೂ ನಿರ್ಮಿಸದಿರಲು ಕಾರಣಗಳೇನು;

ಆ) ಗೋದಾಮು ನಿರ್ಮಾಣಕ್ಕೆ ಮನವಿಗಳೇನಾದರೂ ಸಂಬಂಧಪಟ್ಟವರು ಪಡೆದಿದ್ದಾರೆಯೇ;

ಇ) ಹಾಗಿದ್ದಲ್ಲಿ ಆ ಮನವಿಯ ಮೇಲೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಸಚಿವರು)

ಅ) ತುರುವೇಕೆರೆ ಮಾರುಕಟ್ಟೆ ಪ್ರಾಂಗಣದಲ್ಲಿ 24 ಗೋದಮುಗಳನ್ನು ನಿರ್ಮಿಸಿದ್ದು, ಅವುಗಳಲ್ಲಿ 22 ಗೋದಾಮುಗಳನ್ನು ಪೇಟೆ ಕಾರ್ಯಕರ್ತರಿಗೆ ಹಂಚಿಕೆ ಮಾಡಲಾಗಿದೆ. ಒಂದು ಗೋದಾಮು ಮಾರುಕಟ್ಟೆ ಸಮಿತಿಯ ವಶದಲ್ಲಿದ್ದು ಉಳಿದ ಇನ್ನೊಂದು ಗೋದಾಮು ಕರ್ನಾಟಕ ಆಹಾರ ನಾಗರೀಕ ಸರಬರಾಜು ಇಲಾಖೆ, ತುಮಕೂರು ಇವರಿಗೆ ಲೀವ್ ಅಂಡ್ ಲೈಸೆನ್ಸ್ ಆಧಾರದ ಮೇಲೆ ನೀಡಲಾಗಿದೆ..

ಆ) ಇಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

559(718) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಬೇಲೂರು) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸ್ತ್ರೀಶಕ್ತಿ ಸ್ವಸಹಾಯ ಸಂಘಗಳಿಗೆ ಸರ್ಕಾರ ಸುತ್ತುನಿಧಿ ಸವಲತ್ತು ನೀಡುತ್ತಿರುವುದು ನಿಜವೇ;

ಆ) ಹಾಗಿದ್ದಲ್ಲಿ ನವ ಸಾಕ್ಷರತ ಸ್ವಸಹಾಯ ಸ್ತ್ರೀ ಸಂಘಗಳಿಗೆ ಈ ಸೌಲಭ್ಯವನ್ನು ಸರ್ಕಾರ ನೀಡುವುದೇ;

ಇ) ಸ್ತ್ರೀ ಸ್ವ ಸಹಾಯ ಸಂಘಗಳ ಚಟುವಟಿಕೆಗಳನ್ನು ನಡೆಸಲು ಸಂಘದ ಮನೆ ನಿರ್ಮಾಣ ಮಾಡುವ ಇರಾದೆ ಸರ್ಕಾರಕ್ಕೆ ಇದೆಯೇ?

ಶ್ರೀಮತಿ ಭಾಗೀರಥಿ ಮರಳಸಿದ್ಧನಗೌಡ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ರಚಿಸಲಾಗಿರುವ ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳಿಗೆ ತಲಾ ರೂ. 5.000 ರೂ. ಮತ್ತು ಸಿಡಿಯನ್ನು ಸರ್ಕಾರದಿಂದ ನೀಡಲಾಗುತ್ತಿದೆ.